# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮೂಲತಃ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವ್ಯಾಪ್ತಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ -ಆದೇಶ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 122 ಸೇಶಿಕಾ 2012, ದಿನಾಂಕ: 11-05-2012.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬಿಜಾಪೂರ ಇವರ ಪತ್ರ ಸಂಖ್ಯೆ: ಜಿಪಂಅ / ಸಿಬ್ಬಂದಿ-1 / ಸಿಆರ್-08 / 2012-13, ದಿನಾಂಕ: 31-01-2013

**ಪ್ರಸ್ತಾವನೆ:**

ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ-15 (1) (ಬಿ) (ii)ರನ್ವಯ ತಾಂತ್ರಿಕ ವಿದ್ಯಾರ್ಹತೆ ಇರುವ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಇಂಡಿ ಇಲ್ಲಿನ ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿ ದಿನಾಂಕ: 17-02-2011 ರಿಂದ ಜಾರಿಗೆ ಬರುವಂತೆ ದಿನಾಂಕ: 16-02-2013ರ ವರೆಗಿನ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರೆಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ದಿನಾಂಕ: 31-01-2013ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬಿಜಾಪೂರ ಇವರು ಪ್ರಸ್ತುತ ಇಂಡಿ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಹಾಗೂ ಸದರಿ ಉಪ-ವಿಭಾಗದಲ್ಲಿ ತಾಂತ್ರಿಕ ಸಿಬ್ಬಂದಿಗಳ ಕೊರತೆಯಿರುವ ಕಾರಣ ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರ ಎರವಲು ಸೇವೆಯನ್ನು ವಿಸ್ತರಿಸಿ ಮುಂದುವರೆಸಲು ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಇಂಡಿ ಇಲ್ಲಿ ಮುಂದುವರೆಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ,

**ಆದೇಶ ಸಂಖ್ಯೆ: ಗ್ರಾಅಪ 65 ಸೇಶಿಕಾ 2013**
**ಬೆಂಗಳೂರು, ದಿನಾಂಕ: 01-03-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ-15 (1) (ಬಿ) (ii)ರನ್ವಯ ಈ ಆದೇಶಕ್ಕೆ ಲಗತ್ತಿಸಿರುವ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ನೌಕರರಾದ ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ, ಕಾರ್ಯದಳಪತಿ ಗ್ರೇಡ್-2 (ಸಹಾಯಕ ಇಂಜಿನಿಯರ್) ಇವರ ಗುತ್ತಿಗೆ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಇಂಡಿ ಇಲ್ಲಿನ ಸಹಾಯಕ ಇಂಜಿನಿಯರ್ ಹುದ್ದೆಯಲ್ಲಿ ದಿನಾಂಕ: 17-02-2013ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ;

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1 &2) / (ಆಡಿಟ್).
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಚಿನ್ನಸ್ವಾಮಿ ಕ್ರೀಡಾಂಗಣ, ರಜಭವನ ರಸ್ತೆ, ಬೆಂಗಳೂರು.
3. ಆಡಳಿತಾಧಿಕಾರಿಗಳು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಚಿನ್ನಸ್ವಾಮಿ ಕ್ರೀಡಾಂಗಣ, ರಜಭವನ ರಸ್ತೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಶೇಷಾದ್ರಿಪುರಂ, ಬೆಂಗಳೂರು.

---3

5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದ), ಬೆಂಗಳೂರು / ಧಾರವಾಡ (ಉತ್ತರ)
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ.
7. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಿಜಾಪುರ.
8. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಇಂಡಿ.
9. ಮಾನ್ಯ ಉಪ ಮುಖ್ಯಮಂತ್ರಿಯವರ ಹಾಗೂ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
11. ಶ್ರೀ ಇಸಾಕ್ ಅಹಮ್ಮದ್.ಎಂ.ದಖನಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಇಂಡಿ.
12. ಹೆಚ್ಚುವರಿ ಪ್ರತಿ: ರಕ್ಷಾ ಕಡತ: ಮಾಹಿತಿ ಕೇಂದ್ರ.

## ಗುತ್ತಿಗೆ ಆಧಾರದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ :** ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ ಇವರ ಗುತ್ತಿಗೆ ಆಧಾರದ ನೇಮಕಾತಿಯ ಅವಧಿಯು ದಿನಾಂಕ : 17-02-2013 ರಿಂದ ದಿನಾಂಕ : 16-02-2014ರ ವರೆಗೆ ಅಥವಾ ಮುಂದಿನ ಆದೇಶ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇರುತ್ತದೆ.

2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ :** ಸದರಿ ಅಧಿಕಾರಿಯವರ ಗುತ್ತಿಗೆ ಆಧಾರದ ನೇಮಕಾತಿಯು ದಿನಾಂಕ : 17-02-2013 ರಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.

3. **ವೇತನ ಮತ್ತು ಇತರೆ ಭತ್ಯೆಗಳು :** ಶ್ರೀ ಇಸಾಕ್ ಅಹಮ್ಮದ್ ಎಂ. ದಖನಿ ಇವರು ಗುತ್ತಿಗೆ ಆಧಾರದ ನೇಮಕಾತಿಯ ಅವಧಿಯಲ್ಲಿ ಅವರ ಮಾತೃ ಸಂಸ್ಥೆಯಲ್ಲಿ ಪಡೆಯುತ್ತಿದ್ದ ವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ ನಿಯೋಜನೆ ಭತ್ಯೆ, ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ, ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.

4. **ರಜಾ ನಿಯಮಗಳು :** ಇವರ ಮಾತೃ ಸಂಸ್ಥೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.

5. **ರಜಾ ವೇತನ ವಂತಿಗೆ :** ಅಧಿಕಾರಿಯವರ ಮೂಲವೇತನದ 11% ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.

6. **ಭವಿಷ್ಯ ನಿಧಿ ವಂತಿಗೆ :** ಅಧಿಖಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ 12% ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.

7. **ಉಪದಾನ ವಂತಿಗೆಗಳು :** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮಾನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.

8. **ವೈದ್ಯಕೀಯ ರಿಯಾಯಿತಿ :** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ಅನ್ವಯ ವೈದ್ಯಕೀಯ ವರಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.

9. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ **ಸಹಾಯಕ ಇಂಜಿನಿಯರ್** ಹುದ್ದೆಗೆ ನಿಗಧಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸುತ್ತದೆ.

--2

10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮಾವಳಿಗೆ ಅವರು ಬದ್ಧರಾಗುತ್ತಾರೆ.

11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ನೇಮಕಾತಿಯು ತಾನಗಿಯೇ ಮುಕ್ತಾಯವಾಗುತ್ತದೆ.

12. **ಶ್ರೀ ಇಸಾಕ್ ಅಹಮ್ಮದ್ ಎಂ.ದಖನಿ** ಇವರು **ಸಹಾಯಕ ಇಂಜಿನಿಯರ್** ಹುದ್ದೆಯ ಕೆಲಸ ಕಾರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಿರ್ವಹಿಸತಕ್ಕದ್ದು ಹಾಗೂ ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಾಗ ತಿಳಿದು ಬರುವಂತಹ ಕಚೇರಿಯ ಅಧಿಕೃತ ಗೌಪ್ಯ ಮಾಹಿತಿ ಗಳ ಬಗ್ಗೆ ಕಟ್ಟುನಿಟ್ಟಾಗಿ ಗೌಪ್ಯತೆಯನ್ನು ಕಾಪಾಡತಕ್ಕದ್ದು.

13. ಅಧಿಕಾರಿಯ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ಅಧಿಕಾರಿಯು ಭಾದ್ಯತೆಯುಳ್ಳವರಾಗಿರುತ್ತಾರೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ. 50.00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

---*---

(H.C. Rajappa)
Under Secretary to Government
Rural Development and Panchayat Raj Department
(Services-A)